# ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ

## ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – 560 018

ಸಂಖ್ಯೆ: ಕಸಂವಿ:ಅಧಿಸೂಚನೆ/ವಿ.ಮ.ವಿ.ಉ/ಪರೀಕ್ಷೆಗಳು/05/2014–15 **ದಿನಾಂಕ: 08.01.2015**

**ಅಧಿಸೂಚನೆ**

**ವಿಷಯ: 2014–15ನೇ ಸಾಲಿನಲ್ಲಿ ನಡೆಯಲಿರುವ ಸಂಸ್ಕೃತ/ವೇದ ಬಿ.ಎ. ವಿದ್ವನ್ಮಧ್ಯಮಾ ಮತ್ತು ಸಂಸ್ಕೃತ/ವೇದ ಎಂ.ಎ. ವಿದ್ವದುತ್ತಮಾ ಪರೀಕ್ಷೆಗಳಿಗೆ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸುವ ಬಗೆಗೆ.**

| ಅಭ್ಯರ್ಥಿಗಳಿಂದ ಅರ್ಜಿಗಳನ್ನು ಸ್ವೀಕರಿಸುವ ಕೊನೆಯ ದಿನಾಂಕ | ಬ್ಯಾಂಕ್ ಹುಂಡಿ ಪಡೆಯುವ ದಿನಾಂಕ | ಬ್ಯಾಂಕ್ ಹುಂಡಿಗಳ ಸಹಿತ ಅರ್ಜಿಗಳನ್ನು ವಿಶ್ವವಿದ್ಯಾಲಯಕ್ಕೆ ರವಾನಿಸುವ ದಿನಾಂಕ |
|---|---|---|
| 30.01.2015 | 02.02..2015 | 05.02.2015 |

**ಸೂಚನೆಗಳು:**

1. ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದಿಂದ ಅಧಿಕೃತ ಮಾನ್ಯತೆ ಪಡೆದ ಖಾಸಗಿ ಹಾಗೂ ಸರ್ಕಾರಿ ಸಂಸ್ಕೃತ ಕಾಲೇಜುಗಳು ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ.
2. ಪರೀಕ್ಷಾ ಶುಲ್ಕದ ಹುಂಡಿ (ಡಿ.ಡಿ.)ಯನ್ನು **"ಹಣಕಾಸು ಅಧಿಕಾರಿಗಳು, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು (Finance Officer, Karnataka Samskrit University, Bangalore)"** ಈ ಹೆಸರಿನಲ್ಲಿ ಪಡೆದು ನಿಗದಿತ ದಿನಾಂಕದಂದು ಅರ್ಜಿಯೊಂದಿಗೆ ವಿಶ್ವವಿದ್ಯಾಲಯಕ್ಕೆ ಸಲ್ಲಿಸುವುದು.
3. ನಿಗದಿತ ದಿನಾಂಕದ ನಂತರ ಬಂದ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.
4. **ಬಿ.ಎ.** ಸಂಸ್ಕೃತ/ವೇದ ವಿದ್ವನ್ಮಧ್ಯಮಾ ಮೊದಲನೆಯವರ್ಷದ ಪರೀಕ್ಷೆಯು 2014–15ನೇ ಸಾಲಿನಲ್ಲಿರುವ ಹೊಸಪಠ್ಯಕ್ರಮದಂತೆ ಎರಡನೆಯ ಮತ್ತು ಮೂರನೆಯ ವರ್ಷದ ಪರೀಕ್ಷೆಗಳು ಹಳೆ ಪಠ್ಯಕ್ರಮಗಳಿಗನುಗುಣವಾಗಿ ಹಾಗೂ **ಎಂ ಎ** ಸಂಸ್ಕೃತ/ವೇದ ವಿದ್ವದುತ್ತಮಾ ಪ್ರಥಮ 2014–15ನೇ ಸಾಲಿನಲ್ಲಿರುವ ಹೊಸಪಠ್ಯಕ್ರಮದಂತೆ ಮತ್ತು ಅಂತಿಮ ವರ್ಷದ ಪರೀಕ್ಷೆಗಳು ಹಳೆ ಪಠ್ಯಕ್ರಮಗಳಿಗನುಗುಣವಾಗಿ ನಡೆಯುತ್ತವೆ.
5. **ಬಿ.ಎ.** ಸಂಸ್ಕೃತ/ವೇದ ವಿದ್ವನ್ಮಧ್ಯಮಾ ಮತ್ತು **ಎಂ.ಎ.** ಸಂಸ್ಕೃತ/ವೇದ ವಿದ್ವದುತ್ತಮಾ ಕಾಲೇಜು ವಿದ್ಯಾರ್ಥಿ (ರೆಗ್ಯುಲರ್), ಪುನರಾವರ್ತಿತ ಅಭ್ಯರ್ಥಿಗಳಿಗೆ ಪ್ರತ್ಯೇಕ ಅರ್ಜಿ ನಮೂನೆಗಳಿರುವುದಿಲ್ಲ. ವಿಶ್ವವಿದ್ಯಾಲಯವು ನೀಡಿರುವ ಅಧಿಕೃತ ನಮೂನೆಯಲ್ಲಿ ಮಾಹಿತಿಯನ್ನು ಸ್ಪಷ್ಟವಾಗಿ ನಮೂದಿಸಿ ಸಲ್ಲಿಸುವುದು.
6. ಅರ್ಜಿಗಳೊಂದಿಗೆ ಸಲ್ಲಿಸುವ ನಾಮಾಂಕಿತ ಪಟ್ಟಿಯಲ್ಲಿ ಕೇಂದ್ರ ಸಂಖ್ಯೆ, ಹೆಸರು ಹಾಗೂ ಕಾಲೇಜಿನ ಸಂಕೇತ ಸಂಖ್ಯೆ, ಹೆಸರು ಹಾಗೂ ಸಮೀಪದ ಅಂಚೆ ಕಛೇರಿಯ ಪಿನ್‌ಕೋಡ್ ನಂಬರ್‌ಗಳನ್ನು ಸ್ಪಷ್ಟವಾಗಿ ನಮೂದಿಸುವುದು.
7. **ಬಿ.ಎ.** ಸಂಸ್ಕೃತ/ವೇದ ವಿದ್ವನ್ಮಧ್ಯಮಾ ಮತ್ತು **ಎಂ.ಎ.** ಸಂಸ್ಕೃತ/ವೇದ ವಿದ್ವದುತ್ತಮಾ ಕಾಲೇಜು ಅಭ್ಯರ್ಥಿಗಳಾಗಿದ್ದರೆ **'ಎಫ್'** ಎಂದೂ, ಪುನರಾವರ್ತಿತ ಅಭ್ಯರ್ಥಿಗಳಾಗಿದ್ದರೆ **'ಆರ್'** ಎಂದೂ,

ಅರ್ಜಿಯ ಮೇಲೆ ಬಲತುದಿಯಲ್ಲಿ ಕೆಂಪು ಶಾಯಿಯಲ್ಲಿ ಅಡ್ಡಗೆರೆ ಗುರುತು ಮಾಡಿ **ಬೇಡವಾದದ್ದನ್ನು ಹೊಡೆದು ಹಾಕಬೇಕು.**

**8.** ಪರೀಕ್ಷೆಯ ನಂತರ ವಿನಾಯಿತಿ ಕೋರಿ ಸಲ್ಲಿಸಿದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**9.** ಪರೀಕ್ಷೆ ತೆಗೆದುಕೊಳ್ಳುವ ಎಲ್ಲ ಅಭ್ಯರ್ಥಿಗಳಿಂದ ಇತ್ತೀಚಿನ ಎರಡು ಭಾವಚಿತ್ರಗಳನ್ನು ಪಡೆದು ಒಂದನ್ನು ಅರ್ಜಿಗೂ ಮತ್ತೊಂದನ್ನು ಪ್ರವೇಶ ಪತ್ರಕ್ಕೂ ಲಗತ್ತಿಸಿ ಪ್ರಾಚಾರ್ಯರು ದೃಢೀಕರಿಸಿ ಕಳುಹಿಸುವುದು.

**10.** ಪುನರಾವರ್ತಿತ(ರಿಪೀಟರ್) ಅಭ್ಯರ್ಥಿಗಳು ಈ ಹಿಂದೆ ಪರೀಕ್ಷೆ ತೆಗೆದುಕೊಂಡಿದ್ದ ಕಾಲೇಜಿನ ಮೂಲಕವೇ ಅರ್ಜಿ ಸಲ್ಲಿಸುವುದು. ಕೇಂದ್ರ ಬದಲಾವಣೆ ಹೊಂದಿದ ಹಾಗೂ ಅಪೂರ್ಣವಾದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಇಂತಹ ಪ್ರಸಂಗಕ್ಕೆ ಕಾಲೇಜುಗಳ ಪ್ರಾಚಾರ್ಯರು ಹೊಣೆಗಾರರಾಗಿರುತ್ತಾರೆ.

**11.** ತರಗತಿವಾರು ಪರೀಕ್ಷಾ ಶುಲ್ಕವನ್ನು ಈ ಕೆಳಕಂಡ ಪಟ್ಟಿಯಲ್ಲಿ ತಿಳಿಸಿದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ–1ರ ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕದಿಂದ ಸಂಪೂರ್ಣ ವಿನಾಯಿತಿ ನೀಡಲಾಗಿದೆ. ವಿನಾಯಿತಿ ಪಡೆಯುವ ವಿದ್ಯಾರ್ಥಿಗಳು ತಹಶೀಲ್ದಾರ್‌ರವರಿಂದ ಪಡೆದ ಜಾತಿ ಪ್ರಮಾಣ ಪತ್ರದ ನಕಲು ಪ್ರತಿಯನ್ನು ದೃಢೀಕರಿಸಿ ಕಳುಹಿಸುವುದು. ನಕಲು ಪ್ರಮಾಣಪತ್ರಗಳು ಇಲ್ಲದಿದ್ದಲ್ಲಿ ಶುಲ್ಕದ ದುಪ್ಪಟ್ಟು ಹಣವನ್ನು ಪ್ರಾಚಾರ್ಯರೇ ಭರಿಸಬೇಕು.

| ಕ್ರ. ಸಂ | ಪರೀಕ್ಷೆಗಳ ವಿವರ | ಪರೀಕ್ಷಾ ಶುಲ್ಕ | ಅರ್ಜಿ ಶುಲ್ಕ | ಅಂಕಪಟ್ಟಿ ಶುಲ್ಕ | ಒಟ್ಟು ಮೊತ್ತ |
|---|---|---|---|---|---|
| 1. | ಬಿ.ಎ. ಸಂಸ್ಕೃತ/ ವೇದ ವಿದ್ವನ್ಮಧ್ಯಮಾ | 320.00 | 10.00 | 20.00 | 350.00 |
| 2. | ಎಂ.ಎ ಸಂಸ್ಕೃತ/ ವೇದ ವಿದ್ವದುತ್ತಮಾ | 470.00 | 10.00 | 20.00 | 500.00 |

2. ಹೊರ ರಾಜ್ಯದ ವರ್ಗಾವಣೆ ಪ್ರಮಾಣಪತ್ರವಾದಲ್ಲಿ (ಟ್ರಾನ್ಸ್‌ಫರ್ ಸರ್ಟಿಫಿಕೇಟ್) ಆ ರಾಜ್ಯದ ಸಂಬಂಧಪಟ್ಟ ವಿದ್ಯಾಧಿಕಾರಿಗಳಿಂದ ಮೇಲುಸಹಿ (ಕೌಂಟರ್‌ಸೈನ್) ಮಾಡಿಸಿರಬೇಕು. ವಲಸೆ ಆಧಾರ ಪತ್ರವನ್ನು ಪಡೆದಿರಬೇಕು.

3. ಹೊರ ರಾಜ್ಯದಲ್ಲಿ ಸಂಸ್ಕೃತವನ್ನು ಅಧ್ಯಯನ ಮಾಡಿದ ಪ್ರಮಾಣಪತ್ರವನ್ನು ನೀಡಿ ಪರೀಕ್ಷೆಗೆ ಹಾಜರಾಗುವವರು ನಮ್ಮ ರಾಜ್ಯದ ಉನ್ನತ ಶಿಕ್ಷಣ ಇಲಾಖೆಯ ಸಚಿವಾಲಯದಿಂದ ಸಂಸ್ಕೃತ ಪರೀಕ್ಷೆಗೆ ಸಂಬಂಧಪಟ್ಟಂತೆ ಸಮಾನತೆಯ ಪ್ರಮಾಣಪತ್ರ (ಪ್ಯಾರಿಟಿ ಆಫ್ ಸ್ಟಾಂಡರ್ಡ್) ಪಡೆದು ಲಗತ್ತಿಸಬೇಕು.

4. ಜನ್ಮ ದಿನಾಂಕದ ನಕಲು ಪ್ರತಿಯನ್ನು ದೃಢೀಕರಿಸಿ ಸಲ್ಲಿಸುವುದು.

5. ವಿದ್ವನ್ಮಧ್ಯಮಾ ಮತ್ತು ವಿದ್ವದುತ್ತಮಾ ಪರೀಕ್ಷೆಗಳಿಗೆ ಹಾಜರಾಗುವ ಕಾಲೇಜು ಅಭ್ಯರ್ಥಿಗಳ ವ್ಯಾಸಂಗದ ಅವಧಿ ಪೂರ್ಣವಾಗಿರುವ ಬಗ್ಗೆ ಕಾಲೇಜಿನ ಮುಖ್ಯಸ್ಥರು ದೃಢೀಕರಿಸಬೇಕು.

6. ಪರೀಕ್ಷಾ ಕೇಂದ್ರಗಳಲ್ಲಿ ಅಭ್ಯರ್ಥಿಗಳ ಸಂಖ್ಯೆ ಕಡಿಮೆಯಾದಲ್ಲಿ ಅಂತಹ ಪರೀಕ್ಷಾ ಕೇಂದ್ರವನ್ನು ರದ್ದುಗೊಳಿಸಿ ಸಮೀಪದ ಪರೀಕ್ಷಾ ಕೇಂದ್ರಕ್ಕೆ ವರ್ಗಾಯಿಸಲಾಗುವುದು.

7. ಹಿಂದೆ ತೇರ್ಗಡೆಯಾಗಿರುವ ಅಂಕಪಟ್ಟಿಯ ಜೆರಾಕ್ಸ್ ಪ್ರತಿಯನ್ನು ದೃಢೀಕರಿಸಿ ಅರ್ಜಿಯ ಜೊತೆ ಲಗತ್ತಿಸುವುದು.(ಇಲ್ಲದಿದ್ದಲ್ಲಿ ತಿರಸ್ಕರಿಸಲಾಗುವುದು).

**ವಿಶೇಷ ಸೂಚನೆ :**

1. ಬಿ.ಎ. ಸಂಸ್ಕೃತ/ವೇದ ವಿದ್ವನ್ಮಧ್ಯಮಾ ಪ್ರಥಮ, ದ್ವಿತೀಯ ಮತ್ತು ತೃತೀಯಾ ವರ್ಷ, ಹಾಗೂ ಎಂ.ಎ. ಸಂಸ್ಕೃತ/ವೇದ ವಿದ್ವದುತ್ತಮಾ ಮೊದಲನೆಯ ವರ್ಷ, ಎರಡನೇ ವರ್ಷ. ಈ ಎಲ್ಲಾ ಐದು ವಿಭಾಗಗಳ ವಿದ್ಯಾರ್ಥಿಗಳ ಅರ್ಜಿ ಮತ್ತು ನಾಮಾಂಕಿತ ಪಟ್ಟಿಗಳನ್ನು ಶಾಸ್ತ್ರವಾರು, ತರಗತಿವಾರು, ಪ್ರತ್ಯೇಕವಾಗಿ ಸಲ್ಲಿಸುವುದು.
2. ಅಭ್ಯರ್ಥಿಯ ಹೆಸರು ಮತ್ತು ತಂದೆಯ ಹೆಸರನ್ನು ಅರ್ಜಿ ಮತ್ತು ನಾಮಾಂಕಿತ ಪಟ್ಟಿಗಳಲ್ಲಿ ಸಂಸ್ಕೃತ ಹಾಗೂ ಆಂಗ್ಲಭಾಷೆಯಲ್ಲಿ ಸ್ಪಷ್ಟವಾಗಿ ದಪ್ಪ ಅಕ್ಷರಗಳಲ್ಲಿ (ಕ್ಯಾಪಿಟಲ್ ಲೆಟರ್ಸ್) ನಮೂದಿಸಿ ಕಳುಹಿಸುವುದು.

1. ನಾಮಾಂಕಿತ ಪಟ್ಟಿಯಲ್ಲಿರುವ ಎಲ್ಲಾ ಮಾಹಿತಿಗಳನ್ನು ಪ್ರತ್ಯೇಕ ಫೈಲ್ ಮಾಡಿ ಗಣಕಯಂತ್ರದ (ಕಂಪ್ಯೂಟರ್) ನುಡಿ/ಬರಹ ತಂತ್ರಾಂಶದಲ್ಲಿ ಒಂದೇ ಸಿ.ಡಿ.ಯಲ್ಲಿ ಸಲ್ಲಿಸುವುದು.
2. ಸಿ.ಡಿ.ಯಲ್ಲಿ ನಮೂದಿಸಿರುವ ಮಾಹಿತಿಯನ್ನೇ ಅಂತಿಮವೆಂದು ಪರಿಗಣಿಸಲಾಗುವುದು. ಅದರಲ್ಲಿ ಉಂಟಾದ ತಪ್ಪುಗಳಿಗೆ ಸಂಬಂಧಿಸಿದ ಕಾಲೇಜಿನ ಪ್ರಾಚಾರ್ಯರೇ ಹೊಣೆಗಾರರಾಗಿರುತ್ತಾರೆ.
3. **ಯಾವುದೇ ಅಭ್ಯರ್ಥಿಗಳು ನೇರವಾಗಿ ವಿದ್ವನ್ಮಧ್ಯಮಾ ಮತ್ತು ವಿದ್ವದುತ್ತಮಾ ಅಂತಿಮ ವರ್ಷದ ಪರೀಕ್ಷೆಗಳನ್ನು ತೆಗೆದು ಕೊಳ್ಳಲು ಅವಕಾಶವಿರುವುದಿಲ್ಲ.**

4. ವಿದ್ವದುತ್ತಮಾ ತರಗತಿಗಳ ಕಾಲೇಜು, ಹಾಗೂ ಪುನರಾವರ್ತಿತ ಅಭ್ಯರ್ಥಿಗಳಿಗೆ ವಾರ್ಷಿಕ ಪರೀಕ್ಷೆಯಲ್ಲಿ ಪ್ರತಿಯೊಂದು ಪತ್ರಿಕೆಗಳಿಗೆ 80 ಅಂಕಗಳನ್ನು.ಇನ್ನುಳಿದ 20 ಅಂಕಗಳನ್ನು ಆಂತರಿಕ ಪರೀಕ್ಷೆಗಳಿಗಾಗಿ(Assignment/ Project Work) ನಿಗದಿಪಡಿಸಲಾಗಿದೆ. ಈ ಆಂತರಿಕ ಪರೀಕ್ಷೆಗಳನ್ನು ಆಯಾಯ ಕಾಲೇಜುಗಳ ಪ್ರಾಚಾರ್ಯರೇ ನಡೆಸಿ ಆ ಅಂಕಗಳನ್ನು ವಿಶ್ವವಿದ್ಯಾಲಯಕ್ಕೆ ಕಳುಹಿಸಿಕೊಡುವುದು.
5. ವಿದ್ವನ್ಮಧ್ಯಮಾ ಪರೀಕ್ಷೆಯ ಒಂದು ಶಾಸ್ತ್ರಭಾಗದಲ್ಲಿ ಉತ್ತೀರ್ಣಗೊಂಡು ಮತ್ತೊಂದು ಶಾಸ್ತ್ರದ ಪರೀಕ್ಷೆ ತೆಗೆದುಕೊಳ್ಳುವ ಅಭ್ಯರ್ಥಿಗಳು ಆಯಾಯ ಶಾಸ್ತ್ರದ ವಿದ್ವನ್ಮಧ್ಯಮಾ ಮೊದಲನೆಯ ವರ್ಷ ಪರೀಕ್ಷೆಗೆ ಕುಳಿತುಕೊಳ್ಳಬಹುದು.
6. ಯಾವುದೇ ಸಂಸ್ಕೃತ ಕಾಲೇಜಿನಲ್ಲಿ ಉದ್ಯೋಗದಲ್ಲಿರುವವರು/ ಖಾಸಗಿ ಉದ್ಯೋಗಿಗಳು ಕಾಲೇಜಿನಲ್ಲಿ ರೆಗ್ಯುಲರ್ ವಿದ್ಯಾರ್ಥಿಗಳಾಗಿ ಪರೀಕ್ಷೆ ತೆಗೆದುಕೊಳ್ಳುವಂತಿಲ್ಲ.
7. ಕಳೆದ ಮೂರು ವರ್ಷಗಳಿಂದ ಖಾಸಗಿ ಅಭ್ಯರ್ಥಿಗಳಿಗೆ ನೇರವಾಗಿ ಕಸಂವಿಯಲ್ಲಿಯೇ ತೆಗೆದುಕೊಳ್ಳಲು ಸೂಚಿಸಲಾಗಿದೆ.
8. ಹಿಂದೆ ರೆಗ್ಯುಲರ್ ಆಗಿದ್ದ ವಿದ್ಯಾರ್ಥಿಗಳು ಖಾಸಗಿಯಾಗಿ ಕಸಂವಿಯಲ್ಲಿ ಪರೀಕ್ಷೆ ತೆಗೆದುಕೊಳ್ಳಬಹುದು (ಈಗಾಗಲೇ ರೆಗ್ಯುಲರ್ ವಿದ್ಯಾರ್ಥಿಯಾಗಿದ್ದು ಮಧ್ಯಂತರದಲ್ಲಿ ಉದ್ಯೋಗ ದೊರೆತರೆ ಇನ್ನಿತರ ಕಾರಣಗಳಿಂದ ನಿಯಮಿತವಾಗಿ ಕಾಲೇಜಿಗೆ ಹೋಗಲಾಗದವರು ಕಸಂವಿಯಲ್ಲಿ 2000+ಪರೀಕ್ಷಾಶುಲ್ಕದೊಂದಿಗೆ ಅವಕಾಶ ಕಲ್ಪಿಸಲಾಗಿದೆ).
9. ಕಸಂವಿಯಲ್ಲಿ ಖಾಸಗಿಯಾಗಿ ಪರೀಕ್ಷೆ ತೆಗ್ದುಕೊಂಡವರು ಬೇರಾವ ಕಾಲೇಜಿನಲ್ಲಿ ಅರ್ಜಿ ಸಲ್ಲಿಸುವಂತಿಲ್ಲ.
10. ಈ ಹಿಂದೆ ಪರೀಕ್ಷೆ ತೆಗೆದುಕೊಂಡ ಕೇಂದ್ರದಲ್ಲಿಯೇ ಪರೀಕ್ಷೆತೆಗೆದುಕೊಳ್ಳಬೇಕು. ಯಾವುದೇ ಕಾರಣಕ್ಕೂಕೇಂದ್ರ ಬದಲಾವಣೆಗೆ ಅವಕಾಶವಿರುವುದಿಲ್ಲ.
11. ಕಾಲೇಜುಗಳು ಆವೇದನ ಪತ್ರಗಳ ಜೊತೆಗೆ ವಿದ್ಯಾರ್ಥಿಗಳ ಆಂತರಿಕ ಅಂಕಗಳಪಟ್ಟಿಯನ್ನು ಪ್ರಾಚಾರ್ಯರು ದೃಢೀಕರಿಸಿ ಕಳುಹಿಸಿಕೊಡುವುದು ಆಂತರಿಕ ಮೌಲ್ಯಮಾಪನದ ಅಂಕಗಳಿಲ್ಲದ ಆವೇದನಪತ್ರಗಳನ್ನು ತಿರಸ್ಕರಿಸಲಾಗುವುದು.
12. ಒಂದುಬಾರಿ ಖಾಸಗಿಯಾಗಿ ನೋಂದಾಯಿಸಿದ ಅಭ್ಯರ್ಥಿಗಳು ಯಾವುದೇ ಕಾಲೇಜಿನಲ್ಲಿ ನೋಂದಾಯಿಸಿಕೊಳ್ಳುವಂತಿಲ್ಲ. ಖಾಸಗಿಯಾಗಿಯೇ ಮುಂದುವರಿಯುವುದು. ಇಲ್ಲವಾದಲ್ಲಿ ಅಂತಹವನ್ನು ತಿರಸ್ಕರಿಸಲಾಗುವುದು.
13. ಮೇಲೆ ಹೇಳಿರುವ ಯಾವುದೇ ನಿಯಮ ಉಲ್ಲಂಘನೆಯಾದ ವಿಷಯವು ಕಸಂವಿಯ ಗಮನಕ್ಕೆ ಬಂದರೆ ಅವರ ಅಂಕಪಟ್ಟಿಯನ್ನು ರದ್ದುಗೊಳಿಸಲಾಗುವುದು.

**ಸಹಿ/**

**ಕುಲಸಚಿವರು**

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ
ಬೆಂಗಳೂರು